# ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯದಲ್ಲಿ ಅಂಕೋಲಾ

**ಸಿಸಿ ನಂಬರ 540/2024**

ಆರೋಪಿಯ ಹೆಸರುಃ ವೆಂಕಟೇಶ

ತಂದೆಯ ಹೆಸರುಃ ಲಕ್ಷ್ಮಣ ನಾಯ್ಕ

ವಯಸ್ಸುಃ

ಉದ್ಯೋಗಃ ರೈತಾಬಿ ಮತ್ತು ವ್ಯವಹಾರ

ವಿಳಾಸಃ ಸಾಃ ಕೆಳಗಿನ ಕೊಡಕಣಿ, ಕೊಡಕಣಿ,
ಕುಮಟಾ,

## ಪ್ರಕ್ರಿಯಾ ಸಂಹಿತೆ ಕಲಂ 313 ರೀತ್ಯಾ ಆರೋಪಿಯ ಹೇಳಿಕೆ

ಪ್ರ 1: ನೀನು ಅಭಿಯೋಜನೆಯ ಪರ ಹಾಜರುಪಡಿಸಿರುವ ಸಾಕ್ಷಿಗಳ ಹೇಳಿಕೆ ಕೇಳಿದ್ದಿಯಾ?
ಉತ್ತರಃ

ಪ್ರ 2ಃ ಫಿರ್ಯಾದಿ ದಿವ್ಯಜ್ಯೋತಿ ಫೈನಾನ್ಸ ಮತ್ತು ಇನ್ವೆಸ್ಟಮೆಂಟ್, ಶಿರೂರು ಇದರ ಮ್ಯಾನೇಜಿಂಗ್ ಡೈರೆಕ್ಟರ್ ಆದ ಪಿಡಬ್ಲ್ಯೂ 1- ಪುರುಷೋತ್ತಮ ದೇವಪ್ಪಾ ನಾಯ್ಕ ಇವರು ತಮ್ಮ ಸಾಕ್ಷಿಯಲ್ಲಿ ಆನಂದು ಹುಲಿಯಪ್ಪ ನಾಯ್ಕ ಇವರು ಫಿರ್ಯಾದಿ ಸಂಸ್ಥೆಯಿಂದ ದಿಃ 29-06-2015 ರಂದು ರೂ. 75,000/- ಸಾಲವನ್ನು ಪಡೆದಿದ್ದು, ಆರೋಪಿತನು ವ ಆತನ ಜಾಮಿನುದಾರರು ಒಪ್ಪಿ ಎಲ್ಲಾ ಸಾಲ ಪತ್ರಗಳಿಗೆ ಮತ್ತು ಕರಾರಿಗೆ ಮತ್ತು ಜಾಮೀನು ಪತ್ರಕ್ಕೆ ಸಹಿ ಮಾಡಿಕೊಟ್ಟಿರುತ್ತಾರೆ. ಸದರಿ ಸಾಲದ ಕರಾರುಗಳ ಪ್ರಕಾರ ಸಾಲದ ಹಣವನ್ನು ಮರುಪಾವತಿ ಮಾಡಿಸುವಷ್ಟು ಹಣ ಇದೆ ಎಂದು ನಂಬಿಸಿ ರೂ. 3,00,000/- ಹಣ ತುಂಬುವುದು ಬಾಕಿ ಇದ್ದಾಗ, ಆರೋಪಿತನು ದಿನಾಂಕಃ 16-03-2022 ರಂದು ತಾನು ಕಾರ್ಪೋರೇಶನ್ ಬ್ಯಾಂಕ್ ತಾಃ ಅಂಕೋಲಾ ರವರಲ್ಲಿ ಹಣದ ಉಳಿತಾಯ ಖಾತೆ ಅಡಿಯಲ್ಲಿ ಚೆಕ್ ನಂಬರ

099723 ನ್ನು ರೂ.3,00,000/- ಕ್ಕೆ ನೀಡಿರುತ್ತಾನೆ. ಸದರಿ ಆರೋಪಿ ನೀಡಿದ ಚೆಕ್ಕು ಖಾತೆಯಲ್ಲಿ **“Bank Excluded”** ಎಂದು ಹಿಂಬರಹದೊಂದಿಗೆ ಪರತ್ ಬಂದಿರುತ್ತದೆ. ಈ ಕುರಿತಾಗಿ ಆರೋಪಿತನಿಗೆ ಮುಂಚಿತವಾಗಿ ನೋಟೀಸು ನೀಡಿದರೂ ಸಹ ಹಣ ಮರು ಪಾವತಿಸದೇ ಎನ್ ಐ ಆ್ಯಕ್ಟ್ ಕಲಂ 138 ರಡಿಯಲ್ಲಿ ಶಿಕ್ಷಾರ್ಹ ಅಪರಾಧ ಎಸಗಿರುತ್ತಾರೆ ಎಂದು ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಿ?

ಉತ್ತರಃ

ಪ್ರ 3ಃ ಈ ಪ್ರಕರಣದಲ್ಲಿ ಮತ್ತೇನಾದರೂ ಹೇಳುವುದಿದೆಯಾ?

ಉತ್ತರಃ

ಪ್ರ 4ಃ ನಿಮ್ಮ ಪರವಾಗಿ ಸಾಕ್ಷಿ ಮಾಡಿಸುತ್ತೀಯಾ ಹಾಗೂ ಏನಾದರೂ ಕಾಗದ ಪತ್ರವನ್ನು ಹಾಜರುಪಡಿಸುತ್ತೀಯಾ?

ಉತ್ತರಃ

( ಆರೋಪಿಗೆ ಮೇಲಿನ ಪ್ರಶ್ನೆಗಳನ್ನು ಆತನಿಗೆ ತಿಳಿಯುವ ಭಾಷೆಯಲ್ಲಿ ವಿವರಿಸಲಾಗಿ ಅವರು ಕೊಟ್ಟಿರುವ ಉತ್ತರವನ್ನೇ ಬಹಿರಂಗ ನ್ಯಾಯಾಲಯದಲ್ಲಿ ಪಡೆದುಕೊಳ್ಳಲಾಯಿತು.)

Sd/-

ದಿನಾಂಕಃ 13/01/2025 **( ಅರ್ಪಿತಾ ಬಿ. ಬೆಲ್ಲದ)**

**ಪ್ರಭಾರ ಪ್ರ ದ ನ್ಯಾ ದಂ, ಅಂಕೋಲಾ.**